**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳ ನ್ಯಾಯಾಲಯ, ಹೆಚ್.ಡಿ.ಕೋಟೆ**

**ಸಿ.ಸಿ. ನಂ. 263/18**

**ಸಿ.ಡಬ್ಲ್ಯೂ-12 ಪಿ.ಡಬ್ಲ್ಯೂ-10**

| | | |
|---|---|---|
| ಸಾಕ್ಷಿದಾರರ ಹೆಸರು | : | ಮಹದೇವ |
| ತಂದೆಯ/ ಗಂಡನ ಹೆಸರು | : | ಕಪ್ಪನಯ್ಯ |
| ವಯಸ್ಸು | : | 49 ವರ್ಷ |
| ಉದ್ಯೋಗ | : | ಮುಖ್ಯ ಪೇದೆ |
| ವಾಸ ಸ್ಥಳ | : | ಹೆಚ್ ಡಿ ಕೋಟೆ |

**ದಿನಾಂಕ 11.09.2025 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ:- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು 2017 ರಿಂದ 2020 ರವರೆಗೆ ಹೆಚ್ ಡಿ ಕೋಟೆ ಪೋಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 20.03.2017 ರಂದು ನಾನು ಠಾಣಾ ಉಸ್ತುವಾರಿಯಲ್ಲಿ ಇದ್ದಾಗ ಮಧ್ಯಾಹ್ನ 1.45 ಗಂಟೆಗೆ ಸರ್ಕಾರಿ ಆಸ್ಪತ್ರೆ ಹೆಚ್ ಡಿ ಕೋಟೆ ಸಿಬ್ಬಂದಿಗಳು ಹಾಜರುಪಡಿಸಿದ MLC Memo ಸ್ವೀಕರಿಸಿ ಆಸ್ಪತ್ರೆಗೆ ಭೇಟಿ ನೀಡಿ ಮಧ್ಯಾಹ್ನ 2 ರಿಂದ 2.30 ವರೆಗೆ ಆಸ್ಪತ್ರೆಯಲ್ಲಿ ವೈದ್ಯರ ಸಮಕ್ಷಮ ಗಾಯಾಳುವಿನ ಹೇಳಿಕೆ ಪಡೆದುಕೊಂಡು ವಾಪಸ್ಸ 2.45 ಸಮಯದಲ್ಲಿ ಠಾಣೆ ಮೊಕ್ಕದಮೆ ಸಂಖ್ಯೆ 83/17 ರಂತೆ ಪ್ರಕರಣ ದಾಖಲಿಸಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ 13 ರವರಿಗೆ ವರ್ಗಾಹಿಸಿರುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ನಿಪಿ 8, ಸಾಕ್ಷಿ ಸಹಿಯನ್ನು ನಿಪಿ 8 ಎ ಎಂದು , ಹೇಳಿಕೆಯಲ್ಲಿ ಇರುವ ಸಾಕ್ಷಿ

ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಹೇಳಿಕೆಯನ್ನು ನಿಪಿ 9 ಮತ್ತು ಸಾಕ್ಷಿ ಸಹಿ ನಿಪಿ 9 (ಎ) ಎಂದು, MLC Memo ನಿಪಿ 10, ಸಾಕ್ಷಿ ಸಹಿ ನಿಪಿ 10 (ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

ಚಾಸಾ 1 ರವರ ಹೇಳಿಕೆ ದಾಖಲು ಮಾಡಿಕೊಂಡ ಸಮಯದಲ್ಲಿ ಚಾಸಾ 2 ಮತ್ತು 3 ರವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಸದರಿ ಸಮಯದಲ್ಲಿ ಚಾಸಾ 2 ಮತ್ತು 3 ರವರ ಹೇಳಿಕೆ ಪಡೆದುಕೊಂಡಿಲ್ಲ. ಚಾಸಾ 1 ರವರ ಹೇಳಿಕೆ ಆಧಾರದ ಮೇಲೆ ಪ್ರಥಮ ವರ್ತಮಾನ ವರದಿ ದಾಖಲಿಸಿರುತ್ತೇನೆ. ಸದರಿ ಸಮಯದಲ್ಲಿ ಆರೋಪಿ 7 ವಿರುದ್ಧ ಸಹ ಪ್ರಥಮ ವರ್ತಮಾನ ವರದಿ ದಾಖಲಿಸಿರುತ್ತೇನೆ ಎಂದರೆ ಸರಿ. ಚಾಸಾ 1 ರಿಂದ 3 ರವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಿಲ್ಲ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು).

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ. ದಂಡಾಧಿಕಾರಿಗಳು, ಹೆಚ್.ಡಿ.ಕೋಟೆ.**